**All India Radio: Bangalore**
**National Bulletin In Kannada**
**22.04.2025 13.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಎರಡು ದಿನಗಳ ಸೌದಿ ಅರೇಬಿಯಾ ಪ್ರವಾಸ
2. ವಿಕಸಿತ ಭಾರತ ಗುರಿ ಸಾಧನೆ ರಾಷ್ಟ್ರೀಯ ಜನಾಂದೋಲನವಾಗಿದೆ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್
3. ಜೈಪುರದಲ್ಲಿ ಅಮೆರಿಕಾ ಉಪಾಧ್ಯಕ್ಷ ವಾನ್ಸ್ ಮತ್ತು ಅವರ ಕುಟುಂಬ; ಆತ್ಮೀಯ ಸ್ವಾಗತ ಕೋರಿದ ರಾಜಸ್ಥಾನ ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ
4. ಇಂದು ವಿಶ್ವ ಭೂಮಿ ದಿನ; ಪರಿಸರ ಸಂರಕ್ಷಣೆಗೆ ಜಾಗೃತಿ ಮೂಡಿಸಲು ವಿಶ್ವದೆಲ್ಲೆಡೆ ಅರಿವು ಕಾರ್ಯಕ್ರಮ
5. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಲಕ್ನೋ ಸೂಪರ್ ಜೇಂಟ್ಸ್ - ಡೆಲ್ಲಿ ಕ್ಯಾಪಿಟಲ್ಸ್ ತಂಡಗಳ ನಡುವೆ ಹಣಾಹಣಿ

<><><><>

ಸೌದಿ ಅರೇಬಿಯಾ ಸಾಮ್ರಾಜ್ಯಕ್ಕೆ ಎರಡು ದಿನಗಳ ಭೇಟಿಗಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯಿಂದ ಪ್ರಯಾಣ ಬೆಳೆಸಿದರು. ಪ್ರಯಾಣಕ್ಕೆ ಮುನ್ನ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಸೌದಿ ಅರೇಬಿಯಾ ಜೊತೆಗೆ ಭಾರತ ಬಹುಕಾಲದ ಹಾಗೂ ಐತಿಹಾಸಿಕ ಸಂಬಂಧಗಳನ್ನು ಹೊಂದಿದ್ದು, ಇವುಗಳಿಗೆ ದೇಶ ಅತ್ಯಂತ ಗೌರವ ಭಾವನೆ ಹೊಂದಿದೆ. ಇತ್ತೀಚಿನ ದಿನಗಳಲ್ಲಿ ಇವು ಮತ್ತಷ್ಟು ಆಳದ ಕಾರ್ಯತಂತ್ರ ಮತ್ತು ಸುಸ್ಥಿತಿಯ ಮೌಲ್ಯ ಪಡೆದುಕೊಂಡಿವೆ ಎಂದು ಹೇಳಿದ್ದಾರೆ. ಭಾರತ-ಸೌದಿ ಅರೇಬಿಯಾದ ಸಂಬಂಧಗಳ ವೃದ್ಧಿಗೆ ಅಗಾಧವಾದ ಅವಕಾಶಗಳಿವೆ. ಸೌದಿ ಅರೇಬಿಯಾ ಸಾಮ್ರಾಜ್ಯ ಭಾರತದ ಅತ್ಯಂತ ವಿಶ್ವಾಸನೀಯ ಮಿತ್ರ ಹಾಗೂ ಕಾರ್ಯತಂತ್ರದ ಪಾಲುದಾರ ರಾಷ್ಟ್ರವಾಗಿದೆ ಎಂದು ಪ್ರಧಾನಿ ಬಣ್ಣಿಸಿದ್ದಾರೆ. ಅರಬ್ ಸುದ್ದಿವಾಹಿನಿಗೆ ಮಾಧ್ಯಮಕ್ಕೆ ನೀಡಿದ ಸಂದರ್ಶನದಲ್ಲಿ ೨೦೧೯ರಲ್ಲಿ ಪ್ರಾರಂಭಿಸಲಾದ ವ್ಯೂಹಾತ್ಮಕ ಪಾಲುದಾರಿಕೆ ಮಂಡಳಿ ನಂತರ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳು ಮತ್ತಷ್ಟು ಗಟ್ಟಿಗೊಂಡಿವೆ. ಯುವರಾಜ ಮೊಹಮ್ಮದ್ ಬಿನ್ ಸಲ್ಮಾನ್ ಅವರ ನಾಯಕತ್ವ ಮತ್ತು ಸುಧಾರಣೆಗಳನ್ನು ಒಳಗೊಂಡ ೨೦೩೦ರ ಮುನ್ನೋಟ ಶ್ಲಾಘನೀಯ ಎಂದಿದ್ದಾರೆ. ಹಲವು ಜಾಗತಿಕ ಸವಾಲುಗಳ ನಡುವೆಯೂ ಉಭಯ ದೇಶಗಳ ನಡುವೆ ಅತ್ಯಂತ ಬಲಯುತವಾದ ವ್ಯಾಪಾರ ವಹಿವಾಟು ನಡೆಯುತ್ತಿದ್ದು, ಗಣನೀಯ ಪ್ರಗತಿ ಸಾಧಿಸಲಾಗಿದೆ. ವಿಶೇಷವಾಗಿ ಇಂಧನ, ಕೃಷಿ, ರಸಗೊಬ್ಬರ, ಹಸಿರು ಜಲಜನಕ ಮತ್ತು ತಂತ್ರಜ್ಞಾನ ಸೇರಿದಂತೆ ಹಲವು ವಲಯಗಳಲ್ಲಿ ವಿಶೇಷ ಬೆಳವಣಿಗೆ ಕಂಡು ಬಂದಿದೆ ಎಂದು ಪ್ರಧಾನಿ ತಿಳಿಸಿದ್ದಾರೆ. ಉಭಯ ದೇಶಗಳ ನಡುವೆ ಹೆಚ್ಚುತ್ತಿರುವ ರಕ್ಷಣಾ ಸಹಕಾರ, ಜಂಟಿ ಮಿಲಿಟರಿ ಅಭ್ಯಾಸ ಮತ್ತು ಭಾರತ-ಮಧ್ಯ ಪೂರ್ವ, ಯುರೋಪ್ ಆರ್ಥಿಕ ಕಾರಿಡಾರ್ ಸ್ಥಾಪನೆಗೆ ವಿಶೇಷ ಮಹತ್ವ ಬಂದಿದೆ ಎಂದು ಅವರು ಒತ್ತಿ ಹೇಳಿದ್ದಾರೆ. ಸೌದಿ ಅರೇಬಿಯಾದಲ್ಲಿ ನಡೆಸಲು ಉದ್ದೇಶಿಸಿರುವ ವರ್ಲ್ಡ್ ಎಕ್ಸ್‌ಪೊ ೨೦೩೦ ಮತ್ತು ಫಿಫಾ ವರ್ಲ್ಡ್ ಕಪ್ ೨೦೩೪ ಬಗ್ಗೆ ಪ್ರಶಂಸಿರುವ ಪ್ರಧಾನಿ, ತಮ್ಮ ಈ ಭೇಟಿಯಿಂದ ಸೌದಿ ಅರೇಬಿಯಾ ಜೊತೆಗಿನ ಸಂಬಂಧಗಳನ್ನು ಬಲವರ್ಧನೆ ಮಾಡುವ ನಿಟ್ಟಿನಲ್ಲಿ ಭಾರತದ ಬದ್ಧತೆಯನ್ನು ಪ್ರತಿಪಾದಿಸುತ್ತದೆ ಎಂದು ತಿಳಿಸಿದ್ದಾರೆ. ಈ ಕುರಿತು ನಮ್ಮ ಬಾತ್ಮೀದಾರರಿಂದ ಹೆಚ್ಚಿನ ಮಾಹಿತಿ

<><><><>

೨೦೪೭ರ ವೇಳೆಗೆ ವಿಕಸಿತ ಭಾರತ ಗುರಿ ಸಾಧನೆಯತ್ತ ಭಾರತದ ಪಯಣ ಕೇವಲ ಆಶೋತ್ತರವಾಗಿರದೆ ಇದೊಂದು ರಾಷ್ಟ್ರೀಯ ಆಂದೋಲನವಾಗಿ ರೂಪುಗೊಂಡಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಎಲ್ಲರನ್ನು ಒಳಗೊಂಡ ಸುಸ್ಥಿರ ಹಾಗೂ ಅನ್ವೇಷಣೆಯನ್ನು ಒಳಗೊಂಡ ಪ್ರಗತಿ ಕಾಣುವುದು ವಿಕಸಿತ ಭಾರತದ ಆಂದೋಲನದ ಪ್ರಮುಖ ಧ್ಯೇಯವಾಗಿದೆ ಎಂದು ಅವರು ತಿಳಿಸಿದ್ದಾರೆ. ಅಮೆರಿಕಾದ ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾಲಯದಲ್ಲಿ ಇಂದು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ವಿಶ್ವದ ೧೦ನೇ ಬಹುದೊಡ್ಡ ಆರ್ಥಿಕತೆಯಾಗಿದ್ದ ಭಾರತ ಇದೀಗ ಐದನೇ ಅತಿ ದೊಡ್ಡ ಆರ್ಥಿಕತೆಯ ರಾಷ್ಟ್ರವಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಇದು ಭಾರತದ ಬೆಳವಣಿಗೆಯ ಶಕ್ತಿ ಮತ್ತು ಜಾಗತಿಕ ಪ್ರಸ್ತುತತೆಯ ದ್ಯೋತಕವಾಗಿದೆ ಎಂದು ನಿರ್ಮಲಾ ಸೀತಾರಾಮನ್ ತಿಳಿಸಿದರು. ಭಾರತದಲ್ಲಿ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಅಭಿವೃದ್ಧಿ ವಿಚಾರದಲ್ಲಿ ಗಣನೀಯ ಸಾಧನೆ ಮಾಡಲಾಗಿದೆ. ಮಹಿಳೆಯರ ರಕ್ಷಣೆ, ಆರೋಗ್ಯ ಮತ್ತು ಹಣಕಾಸು ಸ್ವಾತಂತ್ರ್ಯ ಒದಗಿಸಲು ಹಲವಾರು ಕ್ರಮಗಳನ್ನು ಭಾರತ ಸರ್ಕಾರ ಕೈಗೊಂಡಿದೆ ಎಂದು ತಿಳಿಸಿದರು.

<><><>

ಭಾರತ ಪ್ರವಾಸದಲ್ಲಿರುವ ಅಮೆರಿಕಾದ ಉಪಾಧ್ಯಕ್ಷ ಜೆ.ಡಿ.ವಾನ್ಸ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದೆಹಲಿಯಲ್ಲಿ ನಿನ್ನೆ ರಾತ್ರಿ ಮಹತ್ವದ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಉಭಯ ನಾಯಕರು ವಿವಿಧ ವಲಯಗಳಲ್ಲಿನ ದ್ವಿಪಕ್ಷೀಯ ಸಹಕಾರದಲ್ಲಿ ಆಗಿರುವ ಪ್ರಗತಿಯ ಪರಾಮರ್ಶೆ ನಡೆಸಿದರು. ಭಾರತ ಮತ್ತು ಅಮೆರಿಕಾ ನಡುವೆ ಉದ್ದೇಶಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದಿಂದಾಗಿ ಉಭಯ ದೇಶಗಳ ನಡುವಿನ ಜನರ ಕಲ್ಯಾಣಕ್ಕೆ ಕೈಗೊಳ್ಳಲಿರುವ ಸಂಬಂಧದ ಸಂಧಾನ ಮಾತುಕತೆಗಳಲ್ಲಿ ಆಗಿರುವ ಪ್ರಮುಖ ಬೆಳವಣಿಗೆಗಳನ್ನು ನಾಯಕರು ಸ್ವಾಗತಿಸಿದ್ದಾರೆ. ಇಂಧನ, ರಕ್ಷಣೆ, ವ್ಯೂಹಾತ್ಮಕ ತಂತ್ರಜ್ಞಾನಗಳು ಮತ್ತು ಇತರ ವಲಯಗಳಲ್ಲಿ ಪರಸ್ಪರ ಸಹಕಾರ ವಿಸ್ತರಣೆ ನಿಟ್ಟಿನಲ್ಲಿ ಕೈಗೊಂಡಿರುವ ಮುಂದುವರೆದ ಪ್ರಯತ್ನಗಳ ಬಗ್ಗೆ ಉಭಯ ನಾಯಕರು ಗಮನ ಹರಿಸಿದರು. ಪರಸ್ಪರ ಹಿತಾಸಕ್ತಿ ಕಾಯ್ದುಕೊಳ್ಳುವ ವಿವಿಧ ಪ್ರಾದೇಶಿಕ ಮತ್ತು ಜಾಗತಿಕ ವಿಚಾರಗಳ ಕುರಿತು ಉಭಯ ನಾಯಕರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಮುಂಬರುವ ದಿನಗಳಲ್ಲಿ ಸಂಧಾನ ಮಾತುಕತೆ ಮತ್ತು ರಾಜತಾಂತ್ರಿಕತೆಯನ್ನು ಮುಂದುವರೆಸುವ ಅಗತ್ಯತೆಯನ್ನು ಪ್ರತಿಪಾದಿಸಿದರು.
ಅಮೆರಿಕಾದ ಉಪಾಧ್ಯಕ್ಷರು ತಮ್ಮ ಪತ್ನಿ ಉಷಾ ಮತ್ತು ಮಕ್ಕಳೊಂದಿಗೆ ಭಾರತಕ್ಕೆ ಆಗಮಿಸಿದ್ದಾರೆ. ಅವರೊಂದಿಗೆ ಅಮೆರಿಕಾ ಆಡಳಿತದ ಹಿರಿಯ ಅಧಿಕಾರಿಗಳ ನಿಯೋಗ ಸಹ ಆಗಮಿಸಿದೆ. ವ್ಯಾನ್ಸ್ ಅವರ ಗೌರವಾರ್ಥ ಪ್ರಧಾನಿ ನರೇಂದ್ರ ಮೋದಿ ದೆಹಲಿಯಲ್ಲಿ ನಿನ್ನೆ ಔತಣಕೂಟ ಏರ್ಪಡಿಸಿದ್ದರು.

<><><>

ಭಾರತ ಪ್ರವಾಸದಲ್ಲಿರುವ ಅಮೆರಿಕಾ ಉಪಾಧ್ಯಕ್ಷ ಜೆ.ಡಿ.ವಾನ್ಸ್ ತಮ್ಮ ಕುಟುಂಬ ಸದಸ್ಯರೊಂದಿಗೆ ನಿನ್ನೆ ರಾತ್ರಿ ಜೈಪುರ ತಲುಪಿದರು. ಇಂದು ಬೆಳಗ್ಗೆ ವಾನ್ಸ್ ಮತ್ತು ಕುಟುಂಬ ಸದಸ್ಯರು ಜೈಪುರದಲ್ಲಿನ ಭವ್ಯ ಅಂಬರ್ ಕೋಟೆಗೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಅವರನ್ನು ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ ಮತ್ತು ಉಪಮುಖ್ಯಮಂತ್ರಿ ದಿಯಾ ಕುಮಾರಿ ಆತ್ಮೀಯವಾಗಿ ಸ್ವಾಗತಿಸಿದರು. ಉಪಾಧ್ಯಕ್ಷರು ಜೈಪುರದಲ್ಲಿ ಮೂರು ದಿನ ವಾಸ್ತವ್ಯ ಹೂಡಲಿದ್ದಾರೆ. ಅವರೊಂದಿಗೆ ಅವರ ಕುಟುಂಬ ಸದಸ್ಯರು ಇದ್ದಾರೆ. ಅಮೆರಿಕಾ ಆಡಳಿತದ ಹಿರಿಯ ಅಧಿಕಾರಿಗಳ ನಿಯೋಗವೂ ಉಪಾಧ್ಯಕ್ಷರೊಂದಿಗೆ ಇದೆ.

<><><>

ನಿನ್ನೆ ನಿಧನರಾದ ರೋಮನ್ ಕ್ಯಾಥೋಲಿಕ್ ಚರ್ಚ್ ಪ್ರಧಾನ ಧರ್ಮ ಗುರು ಪೋಪ್ ಫ್ರಾನ್ಸಿಸ್ ಅವರ ಗೌರವಾರ್ಥ ಭಾರತದಲ್ಲಿ ಮೂರು ದಿನಗಳ ಶೋಕಾಚರಣೆಯನ್ನು ಕೇಂದ್ರ ಸರ್ಕಾರ ಘೋಷಣೆ ಮಾಡಿದೆ. ಇಂದು ಮತ್ತು ನಾಳೆ ಶೋಕಾಚರಣೆಯನ್ನು ಆಚರಿಸಲಾಗುವುದು. ಧರ್ಮ ಗುರುಗಳ ಅಂತ್ಯಕ್ರಿಯೆ ದಿನದಂದು ಶೋಕಾಚರಣೆಗೆ ಸರ್ಕಾರ ನಿರ್ಧರಿಸಿದೆ. ಶೋಕಾಚರಣೆ ಸಂದರ್ಭದಲ್ಲಿ ಭಾರತದಲ್ಲಿನ ಎಲ್ಲಾ ಸರ್ಕಾರಿ ಕಚೇರಿಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧಕ್ಕೆ ಇಳಿಸಲಾಗುವುದು. ಈ ಸಂದರ್ಭದಲ್ಲಿ ಯಾವುದೇ ಅಧಿಕೃತ ಮನರಂಜನಾ ಕಾರ್ಯಕ್ರಮಗಳು ಇರುವುದಿಲ್ಲ.

<><><>

ಇಂದು ವಿಶ್ವ ಭೂಮಿ ದಿನ. ಪರಿಸರ ಸಂರಕ್ಷಣೆಗೆ ಬೆಂಬಲ ಪ್ರದರ್ಶಿಸಲು ಈ ದಿನವನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತಿದೆ. ೧೯೬೯ ರಲ್ಲಿ ಯುನೆಸ್ಕೋ ಶೃಂಗಸಭೆಯಲ್ಲಿ ವಿಶ್ವ ಭೂಮಿ ದಿನವನ್ನಾಗಿ ಆಚರಿಸಬೇಕೆಂಬ ಸಲಹೆ ಬಂದ ನಂತರ ೧೯೭೦ ರಲ್ಲಿ ಮೊದಲ ಭೂಮಿ ದಿನ ಆಚರಣೆಯನ್ನು ನಡೆಸಲಾಯಿತು. ಈ ವರ್ಷದ ಧ್ಯೇಯ ವಾಕ್ಯ "ನಮ್ಮ ಶಕ್ತಿ, ನಮ್ಮ ಗ್ರಹ" ಎಂಬುದಾಗಿದೆ. ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಮತ್ತು ನಮ್ಮ ಭೂಗ್ರಹವನ್ನು ಸಂರಕ್ಷಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಹುರಿದಿಂಬಿಸುವುದು ಈ ದಿನದ ಉದ್ದೇಶವಾಗಿದೆ.

<><><>

ಒಂದು ರಾಷ್ಟ್ರ-ಒಂದು ಚುನಾವಣೆ ನಡೆಸುವ ಸಂಬಂಧ ಅಧ್ಯಯನ ನಡೆಸಿ ವರದಿ ನೀಡಲು ರಚಿಸಲಾಗಿರುವ ಜಂಟಿ ಸಂಸದೀಯ ಸಮಿತಿಯ ಸಭೆ ಸಂಸತ್ ಭವನದಲ್ಲಿಂದು ಪ್ರಗತಿಯಲ್ಲಿದೆ. ಲೋಕಸಭೆಯ ೨೭ ಹಾಗೂ ರಾಜ್ಯಸಭೆಯ ೧೨ ಮಂದಿ ಸಂಸದರು ಈ ಸಮಿತಿಯ ಸದಸ್ಯರಾಗಿದ್ದಾರೆ.

<><><>

ಕೋವಿಡ್-೧೯ರ ಸಾಂಕ್ರಾಮಿಕದ ಸಂದರ್ಭದಲ್ಲಿ ಸ್ಥಗಿತಗೊಳಿಸಲಾಗಿದ್ದ ಕೈಲಾಸ ಮಾನಸ ಸರೋವರ ಯಾತ್ರೆ ನಾಲ್ಕು ವರ್ಷಗಳ ನಂತರ ಜೂನ್ ೩೦ ರಿಂದ ಆರಂಭವಾಗಲಿದೆ.

<><><>

ಲಕ್ನೊದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕನ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೇಂಟ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><><>

ಪೆರುವಿನ ಲಿಮಾದಲ್ಲಿ ನಡೆದ ಅಂತಾರಾಷ್ಟ್ರೀಯ ಶೂಟಿಂಗ್ ಸ್ಪೋರ್ಟ್ ಫೆಡರೇಶನ್- ಐಎಸ್ಎಸ್ಎಫ್ ವಿಶ್ವಕಪ್ ಪಂದ್ಯಾವಳಿಯಲ್ಲಿ ಮಹಿಳೆಯರ ೨೫ ಮೀಟರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಭಾರತದ ಸಿಮ್ರಾನ್‌ಪ್ರೀತ್ ಕೌರ್ ಬ್ರಾರ್ ಬೆಳ್ಳಿ ಪದಕದೊಂದಿಗೆ ತಮ್ಮ ಚೊಚ್ಚಲ ಹಿರಿಯರ ಅಂತಾರಾಷ್ಟ್ರೀಯ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>